# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 102 (689)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮುಖ್ಯಮಂತ್ರಿಗಳು

ವಿಷಯ : ವಿದ್ಯುತ್ ವಿತರಣಾ ಕಂಪನಿಗಳ ಖಾಸಗೀಕರಣದ ಕುರಿತು

(ಅ) ಕರ್ನಾಟಕ ಸರ್ಕಾರದ ಇಂಧನ ಇಲಾಖೆಯ ಅಧೀನದ ವಿವಿಧ ವಿದ್ಯುತ್ ವಿತರಣಾ ಕಂಪನಿಗಳನ್ನು ಖಾಸಗೀಕರಣಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ಕರಡು ನಿಯಮಾವಳಿಯನ್ನು ರೂಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ ಕರಡು ಪ್ರತಿಯನ್ನು ಒದಗಿಸುವುದು;

(ಆ) ಈ ಖಾಸಗೀಕರಣವನ್ನು ವಿರೋಧಿಸಿ ಇಲಾಖೆಯ ನೌಕರರ ಸಂಘಟನೆಗಳು ಮತ್ತು ಸಂಘ ಸಂಸ್ಥೆಗಳು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಂಘಟಣೆಗಳು ಆಕ್ಷೇಪಿಸಿದ ಕಾರಣಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಖಾಸಗೀಕರಣದ ಕುರಿತು ಕೇಂದ್ರ ಸರ್ಕಾರಕ್ಕೆ ಇಲಾಖೆಯಿಂದ ಅಭಿಪ್ರಾಯ ಸಲ್ಲಿಸಿ ಪತ್ರವನ್ನು ಸಲ್ಲಿಸಲಾಗಿದೆಯೇ; (ಪ್ರತಿಯನ್ನು ಒದಗಿಸುವುದು ಇಲ್ಲವಾದಲ್ಲಿ ಕಾರಣವೇನು)

(ಈ) ಖಾಸಗೀಕರಣದಿಂದ ಬಡಕುಟುಂಬಗಳಿಗೆ ಭಾಗ್ಯ ಜ್ಯೋತಿ, ಕುಟೀರ ಜ್ಯೋತಿ, ರೈತರ ಕೃಷಿ ಪಂಪುಗಳಿಗೆ ಉಚಿತ ವಿದ್ಯುತ್ ಕಲ್ಪಿಸುವಿಕೆಯನ್ನು ಮುಂದುವರಿಕೆ ಖಾತ್ರಿ ಪಡಿಸಲು ಸರ್ಕಾರದ ಕ್ರಮವೇನು?